# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **1894**

ಸದಸ್ಯರ ಹೆಸರು : **ಶ್ರೀ. ಚಿದಾನಂದ್ ಎಂ ಗೌಡ (ಪದವೀಧರ ಕ್ಷೇತ್ರದಿಂದ ಚುನಾಯಿತರಾದವರು)**

ಉತ್ತರಿಸುವ ದಿನಾಂಕ : **24/03/2026**

ಉತ್ತರಿಸುವ ಸಚಿವರು : **ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು**

| | ಪ್ರಶ್ನೆ | ಉತ್ತರ |
|---|---|---|
| ಅ | ಕಳೆದ ಹತ್ತು ವರ್ಷಗಳಲ್ಲಿ ರಾಜ್ಯದಲ್ಲಿ ಗ್ರಾಮ ಪಂಚಾಯತ್‌ನಿಂದ ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗೆ ಉನ್ನತೀಕರಣಗೊಂಡ ಗ್ರಾಮ ಪಂಚಾಯಿತಿಗಳ ಸಂಖ್ಯೆ ಎಷ್ಟು; | ಕಳೆದ ಹತ್ತು ವರ್ಷಗಳಲ್ಲಿ ಗ್ರಾಮ ಪಂಚಾಯಿತಿಗಳಿಂದ ಪರಿವರ್ತನೆಯಾಗಿರುವ ನಗರ ಸ್ಥಳೀಯ ಸಂಸ್ಥೆಗಳು: 51 |
| ಆ | ಗ್ರಾಮ ಪಂಚಾಯ್ತಿತಿಯ ಇ-ಸ್ವತ್ತುವಿನಿಂದ ಪುರಸಭೆಯ ಇ-ಆಸ್ತಿಗೆ ಎಷ್ಟು ಪಟ್ಟಣ ಪಂಚಾಯಿತಿ ಮತ್ತು ಪುರಸಭೆಗೆ ಎಷ್ಟು ಆಸ್ತಿಗಳನ್ನು ಇಂದೀಕರಣ ಮಾಡಲಾಗಿದೆ; ಮಾಡದೆ ಇದ್ದರೆ, ಇದಕ್ಕೆ ಕಾರಣಗಳೇನು; ಇಂದೀಕರಣ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು; | ಗ್ರಾಮ ಪಂಚಾಯಿತಿಯನ್ನು ಪಟ್ಟಣ ಪಂಚಾಯಿತಿಯನ್ನಾಗಿ ಪರಿವರ್ತಿಸಿದ ನಂತರ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯ ಸಹಮತಿ ಪಡೆದು ಇ-ಸ್ವತ್ತು ತಂತ್ರಾಂಶದಲ್ಲಿನ ದಾಖಲಾತಿಯನ್ನು ಇ-ಆಸ್ತಿ ತಂತ್ರಾಂಶದಲ್ಲಿ ಆಸ್ತಿಗಳನ್ನು ಸಂಯೋಜನೆ ಮಾಡುವ ಕ್ರಮ ಚಾಲ್ತಿಯಲ್ಲಿರುತ್ತದೆ. ಪ್ರಸ್ತುತ ಒಟ್ಟು 138 ಗ್ರಾಮಗಳ ಇ-ಸ್ವತ್ತು ತಂತ್ರಾಂಶದಲ್ಲಿನ ಆಸ್ತಿಗಳನ್ನು ಇ-ಆಸ್ತಿ ತಂತ್ರಾಂಶದಲ್ಲಿ ಇಂದೀಕರಿಸಲಾಗಿರುತ್ತದೆ. |
| ಇ | ಗ್ರಾಮ ಪಂಚಾಯಿತಿಯು ಉನ್ನತೀಕರಣಗೊಂಡಾಗ ಆಸ್ತಿಗಳನ್ನು ಪೌರಾಡಳಿತ ಇಲಾಖೆಯ ಸ್ಥಳೀಯ ಸಂಸ್ಥೆಗೆ ಇಂದೀಕರಣ ಮಾಡಬೇಕು ಎನ್ನುವುದು ಪೌರಾಡಳಿತ ಇಲಾಖೆಯ ಕಾಯ್ದೆ ಮತ್ತು ಸುತ್ತೋಲೆಯಲ್ಲಿ ಇದೆಯೇ: ಇದ್ದರೆ, ಅದರ ಪ್ರತಿಯನ್ನು ನೀಡುವುದು; | ಗ್ರಾಮ ಪಂಚಾಯಿತಿ ಪ್ರದೇಶಗಳು ಪಟ್ಟಣ ಪಂಚಾಯಿತಿ, ಪುರಸಭೆ, ನಗರಸಭೆ, ಮಹಾನಗರ ಪಾಲಿಕೆ ವ್ಯಾಪ್ತಿಗೆ ಸೇರಿಸಲ್ಪಟ್ಟ ತರುವಾಯ ಇಲ್ಲವೇ ಗ್ರಾಮ/ಗ್ರಾಮ ಪಂಚಾಯಿತಿಯನ್ನು ನಗರ ಸ್ಥಳೀಯಾಗಿ ಪರಿವರ್ತಿಸಿದ ತರುವಾಯ ಸದರಿ ಗ್ರಾಮ ಪಂಚಾಯಿತಿ ಪ್ರದೇಶಗಳ ಆಯವ್ಯಯ, ಆಸ್ತಿ, ಹಕ್ಕು ಮತ್ತು ಬಾಧ್ಯತೆಗಳು ಕರ್ನಾಟಕ ಪೌರಸಭೆಗಳ ಅಧಿನಿಯಮ 1964 ರ ಸೆಕ್ಷನ್-355, 355A, 355B, 355C, 355D, 355E, 357, 359, & 360 ರಲ್ಲಿರುವಂತೆ ಮತ್ತು ಕರ್ನಾಟಕ ಮಹಾನಗರ ಪಾಲಿಕೆಗಳ ಅಧಿನಿಯಮ 1976 ರ ಸೆಕ್ಷನ್-500 & 501 ರಲ್ಲಿರುವಂತೆ ಆಯಾ ನಗರ ಸ್ಥಳೀಯ ಸಂಸ್ಥೆಯ ಸುಪರ್ದಿಗೆ ಒಳಪಡುತ್ತವೆ. |

| | | |
|---|---|---|
| ಈ | ಪುರಸಭೆ ಮತ್ತು ಸ್ಥಳೀಯ ಸಂಸ್ಥೆಯ ಅಧಿಕಾರಿಗಳು ಗ್ರಾಮಠಾಣಾ ವ್ಯಾಪ್ತಿಯ ಸ್ವತ್ತುಗಳಿಗೂ ಸಹ ನೋಂದಾಯಿತ ದಾಖಲೆಗಳನ್ನು ನೀಡುವಂತೆ ಕೇಳಿ ಇ-ಆಸ್ತಿ ನೀಡದೆ ತೊಂದರೆ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಗ್ರಾಮಠಾಣಾ ವ್ಯಾಪ್ತಿಯ ಆಸ್ತಿ ಮಾಲೀಕರು ಇ-ಆಸ್ತಿ ಪಡೆಯಲು ಸಲ್ಲಿಸಬೇಕಾದ ದಾಖಲೆಗಳು ಯಾವುವು? (ಇದಕ್ಕೆ ಸಂಬಂಧಿಸಿದ ಕಾಯ್ದೆ/ಸುತ್ತೋಲೆಯ ಪ್ರತಿಯನ್ನು ನೀಡುವುದು) | ಗ್ರಾಮಠಾಣಾ ವ್ಯಾಪ್ತಿಯ ಸ್ವತ್ತುಗಳಿಗೆ ನೋಂದಾಯಿತ ದಾಖಲೆಗಳನ್ನು ನೀಡುವಂತೆ ಕೇಳಿದವರಿಗೆ ಪುರಸಭೆ ಮತ್ತು ನಗರ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳು ಇ-ಆಸ್ತಿ ನೀಡದೇ ತೊಂದರೆ ನೀಡುತ್ತಿರುವ ಬಗ್ಗೆ ಯಾವುದೇ ದೂರು ಸ್ವೀಕೃತವಾಗಿರುವುದಿಲ್ಲ.<br><br>ಗ್ರಾಮ ಠಾಣಾ ಆಸ್ತಿಗಳಿಗೆ ಇ-ಆಸ್ತಿ ತಂತ್ರಾಂಶದಲ್ಲಿ ನಮೂನೆ-3 ಸೃಜಿಸಲು ಗ್ರಾಮ ಠಾಣಾ ವ್ಯಾಪ್ತಿಯಲ್ಲಿ ಸ್ವತ್ತು ಇರುವ ಬಗ್ಗೆ ನಕ್ಷೆಯನ್ನು ಮಾತ್ರ ಸಲ್ಲಿಸಬೇಕಾಗಿರುತ್ತದೆ. ಗ್ರಾಮ ಠಾಣಾ ವ್ಯಾಪ್ತಿಯಲ್ಲಿರುವ ಸ್ವತ್ತುಗಳಿಗೆ ಬೇರೆ ಯಾವುದೇ ದಾಖಲೆಗಳನ್ನು ಪಡೆಯಲು ತಿಳಿಸಲಾಗಿರುವುದಿಲ್ಲ. |

**ಸಂಖ್ಯೆ:ನಅಇ 28 ಎಲ್‌ಸಿಕ್ಯೂ 2026**

(ರಹೀಂ ಖಾನ್)
**ಪೌರಾಡಳಿತ ಹಾಗೂ ಹಜ್ ಸಚಿವರು**